ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ: ಜಿಎಲ್13/152/2022-23

ದಿನಾಂಕ: 01-09-2023

## ಸುತ್ತೋಲೆ

ವಿಷಯ: "ಶಿಕ್ಷಕರ ದಿನಾಚರಣೆ" ಸಮಾರಂಭವನ್ನು ಆಚರಿಸುವ ಬಗ್ಗೆ.
ಉಲ್ಲೇಖ: "ಶಿಕ್ಷಕರ ದಿನಾಚರಣೆ" ಆಚರಣೆಯ ಸಂಬಂಧ, ದಿನಾಂಕ:31-08-2023
ರಂದು ನಡೆದ ಅಧಿಕಾರಿಗಳ ಸಭೆಯ ತೀರ್ಮಾನ

****

ವಿಶ್ವವಿದ್ಯಾನಿಲಯದ ವತಿಯಿಂದ ದಿನಾಂಕ: 05.09.2023ರಂದು ಬೆಳಗ್ಗೆ 11.00 ಗಂಟೆಗೆ ವಿಜ್ಞಾನ ಭವನದ ಸಭಾಂಗಣದಲ್ಲಿ ತತ್ವಜ್ಞಾನಿ ಹಾಗೂ ಭಾರತ ರತ್ನ ಪ್ರಶಸ್ತಿ ಪುರಸ್ಕೃತರೂ ಆದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಹುಟ್ಟುಹಬ್ಬದ ನೆನಪಿನಾರ್ಥ ಪ್ರತೀ ವರ್ಷದಂತೆ "ಶಿಕ್ಷಕರ ದಿನಾಚರಣೆ" ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಸದರಿ ಸಮಾರಂಭಕ್ಕೆ ಮುಖ್ಯ ಅತಿಥಿಗಳಾಗಿ ಪ್ರೊ. ಮುಜಾಫ್ಫರ್ ಹೆಚ್. ಅಸ್ಸಾದಿ, ನಿವೃತ್ತ ಪ್ರಾಧ್ಯಾಪಕರು, ರಾಜ್ಯಶಾಸ್ತ್ರ ಅಧ್ಯಯನ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಶಿಕ್ಷಕರ ದಿನಾಚರಣೆಯ ಅಂಗವಾಗಿ ಉಪನ್ಯಾಸ ನೀಡುವರು.

ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಬಟವಾಡೆ ಅಧಿಕಾರಿಗಳು/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಾಪಕರು/ಅತಿಥಿ ಉಪನ್ಯಾಸಕರು/ಸಂಶೋಧಕರು ದಿನಾಂಕ: 05.09.2023 ರಂದು ಬೆಳಗ್ಗೆ 10.30 ಗಂಟೆಗೆ ವಿಜ್ಞಾನ ಭವನದ ಸಭಾಂಗಣದಲ್ಲಿ ಕಡ್ಡಾಯವಾಗಿ ಆಸೀನರಾಗಲು ತಿಳಿಸಲಾಗಿದೆ.

ಸದರಿ ಕಾರ್ಯಕ್ರಮ ಮುಗಿದ ನಂತರ ತಮ್ಮ ವಿಭಾಗ/ಕಛೇರಿ/ತರಗತಿಗಳಿಗೆ ತೆರಳುವುದು.

1/9/2023

ಕುಲಸಚಿವ

ಗೆ,

1. ಎಲ್ಲಾ ನಿಕಾಯದ ಡೀನರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ಕುಲಸಚಿವ(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಕಾರ್ಯಪಾಲಕ ಅಭಿಯಂತರರು, ತಾಂತ್ರಿಕ ವಿಭಾಗ, ಮೈ.ವಿ.ವಿ.ನಿಲಯ, ಮೈಸೂರು.
5. ಮಾನ್ಯ ಕುಲಪತಿಗಳ ವಿಶೇಷಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನ ನಿರ್ದೇಶನಾಲಯ, ಮಾನಸಗಂಗೋತ್ರಿ, ಮೈಸೂರು.
7. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ ಸಂಯೋಜನಾಧಿಕಾರಿಗಳು ಮತ್ತು ಅಧ್ಯಾಪಕರು.
8. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು.
9. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈ.ವಿ.ವಿ.ನಿಲಯ, ಮೈಸೂರು.
10. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
11. ಸಂಯೋಜಕರು, ಐ.ಸಿ.ಡಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.
12. ಸಂಯೋಜಕರು ಐ.ಓ.ಇ.-ಸದರಿ ದಿನದಂದು ಸಭಾಂಗಣದಲ್ಲಿ ಆಸನ ವ್ಯವಸ್ಥೆ, ಸ್ವಚ್ಛತೆ ಮುಂತಾದ ಸೂಕ್ತ ಕ್ರಮ ಕೈಗೊಳ್ಳಬೇಕಾಗಿ ಕೋರಿದೆ.
13. ಸಹಾಯಕ ನಿರ್ದೇಶಕರು, ತೋಟಗಾರಿಕೆ ವಿಭಾಗ, ಮಾ.ಗಂ., ಮೈಸೂರು-ಸೂಕ್ತ ಕ್ರಮಕ್ಕಾಗಿ.
14. ಮಾನ್ಯ ಕುಲಪತಿಯವರ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈವಿವಿ, ಮೈಸೂರು.
15. ಕಛೇರಿ ಪ್ರತಿ.

(ಕ್ರಮ ಸಂಖ್ಯೆ 6–11ಕ್ಕೆ:) ಈ ವಿಷಯವನ್ನು ತಮ್ಮ ವಿಭಾಗದ ಎಲ್ಲಾ ಅಧ್ಯಾಪಕರು/ ಅತಿಥಿ ಉಪನ್ಯಾಸಕರು/ ಸಂಶೋಧಕರುಗಳ ಗಮನಕ್ಕೆ ತರಬೇಕೆಂದು ತಿಳಿಸಿದೆ. ಹಾಗೂ ಈ ಕಾರ್ಯಕ್ರಮವು ಶಿಕ್ಷಕರ ಗೌರವದ ಸಂಕೇತವಾಗಿರುವುದರಿಂದ ಎಲ್ಲರೂ ಭಾಗವಹಿಸುವಂತೆ ಸೂಕ್ತ ಕ್ರಮ ಕೈಗೊಂಡು ಕಾರ್ಯಕ್ರಮ ಯಶಸ್ವಿಯಾಗಲು ಸಹಕರಿಸುವಂತೆ ಕೋರಿದೆ.